**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯ, ರಾಜರಾಜೇಶ್ವರಿ ನಗರ ಉಪ ವಿಭಾಗದ ವಾರ್ಡ್ ಸಂಖ್ಯೆ 160ರಲ್ಲಿ**

**ದಿನಾಂಕ: 02.01.2021 ರಂದು, ನಡೆದ ವಾರ್ಡ್ ಕಮಿಟಿ ಸಭೆಯ ಸಭಾ ನಡಳಿಗಳು**

ದಿನಾಂಕ:02.01.2021 ರಂದು ವಾರ್ಡ್ ಸಂಖ್ಯೆ 160ರ ಜನವರಿ ಮಾಹೆಯ ವಾರ್ಡ್ ಸಮಿತಿ ಸಭೆಯು ನಡೆಯಿತು. ಸದರಿ ಸಭೆಯಲ್ಲಿ ವಾರ್ಡ್‌ಸಮಿತಿ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

**ಸದರಿ ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.**

❖ **ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದ ವಿಷಯಗಳು**

- ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಮನೆ ಮನೆಗೆ ತೆರಳಿ ಪ್ರತಿನಿತ್ಯ ಕಸ ಸಂಗ್ರಹಣೆ ಮಾಡಲು ಕ್ರಮ ವಹಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

- ಕಸ ವಿಂಗಡಣೆ ಸರಿಯಾಗಿ ಆಗುತ್ತಿಲ್ಲದಿರುವುದು ಕಂಡು ಬಂದಿದ್ದು ಹಸಿ ಕಸ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ಸಂಗ್ರಹಿಸಿ ತೆರವುಗೊಳಿಸಲು ಕ್ರಮ ವಹಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿ ಈ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಸೂಚಿಸಲಾಯಿತು.

❖ **ಪೋಲೀಸ್ ಇಲಾಖೆಗೆ ಸಂಬಂಧಿಸಿದ ವಿಷಯಗಳು**

- ವಾರ್ಡ್ ಸಮಿತಿ ಸದಸ್ಯರಾದ ಪಾಂಡುರಂಗ ರವರು ಕಳೆದ ಸಭೆಯಲ್ಲಿ ಬೀದಿ ಬದಿ ತಿರುಗುವ ವ್ಯಾಪಾರಿಗಳು ಜೋರು ಧ್ವನಿಯಲ್ಲಿ ಧ್ವನಿವರ್ಧಕಗಳ ಅಳವಡಿಸಿಕೊಂಡು ವ್ಯಾಪಾರ ನಡೆಸುತ್ತಿರುವುದು ಕಂಡು ಬಂದಿದ್ದು ತಮ್ಮ ಪ್ರದೇಶದ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದಾಗಿ ದೂರು ನೀಡಿದ್ದರೂ, ಸಹ ತಿರುಗುವ ವ್ಯಾಪಾರಿಗಳು ಜೋರು ಧ್ವನಿಯಲ್ಲಿ ವ್ಯಾಪಾರ ನಡೆಸುತ್ತಿರುವುದನ್ನು ಮುಂದುವರೆಸಿರುತ್ತಾರೆಂದು ತಿಳಿಸಿ ಈ ಬಗ್ಗೆ ಕ್ರಮ ವಹಿಸಲು ಪೋಲೀಸ್ ಇಲಾಖೆಯ ಅಧಿಕಾರಿಗಳಿಗೆ ಕೋರಿದರು.

## ❖ <u>ಕಾಮಗಾರಿ ವಿಭಾಗಕ್ಕೆ ಸಂಬಂಧಿಸಿದ ವಿಷಯಗಳು</u>

- ವಾರ್ಡ್ ಸಮಿತಿ ಸದಸ್ಯರಾದ ಶ್ರೀ.ಎಸ್.ಆರ್.ಪಾಂಡುರಂಗವರು ಐಡಿಯಲ್ ಹೋಮ್ಸ್ ಬಡಾವಣೆಯಲ್ಲಿ ರಸ್ತೆ ಡಾಂಬರೀಕರಣ ಕಾಮಗಾರಿ ನಡೆದಿರುವುದಿಲ್ಲವೆಂದು ದೂರು ನೀಡಿದರು, ಇದಕ್ಕೆ ಉತ್ತರಿಸಿದ ವಾರ್ಡ್ ಅಭಿಯಂತರರು ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂದಿಸಿದಂತೆ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಶ್ರೀಘ್ರದಲ್ಲೆ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದೆಂದು ತಿಳಿಸಿದರು.
- ಸಿಲ್ಟ್ & ಟ್ರ್ಯಾಕ್ಟರ್ ಕಾಮಗಾರಿಯು ಮುಂದಿನ ಸೋಮವಾರದಿಂದ ಶುರವಾಗಲೇಬೇಕೆಂದು ವಾರ್ಡ್ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.
- ಡ್ರೈವೇಸ್ಟ್ ಸೆಂಟರ್ ಹತ್ತಿರ ನಿರ್ಮಾಣವಾಗುತ್ತಿರುವ ವೃದ್ಧಾಶ್ರಮ ಕಟ್ಟಡದಿಂದಾಗುತ್ತಿರುವ ತೊಂದರೆಯನ್ನು ನಿವಾರಿಸಲು ನೋಡಲ್ ಅಧಿಕಾರಿಗಳು ಸೂಚಿಸಿದರು.
- ಸಪ್ತಗಿರಿ ಬಡಾವಣೆಯ ನಿವಾಸಿಯಾದ ಶ್ರೀಮತಿ ಪ್ರತಿಮಾರಾವ್‌ರವರು ರಸ್ತೆ ಬದಿ ಸ್ವಚ್ಛತೆ ಮಾಡುತ್ತಿಲ್ಲವೆಂದು ದೂರು ನೀಡಿದರು ಹಾಗೂ ರಸ್ತೆ ಬದಿ ಸುರಿದಿರುವ ಡೆಬ್ರಿಸ್ ತೆರವುಗೊಳಸಲು ಕೋರಿದರು ಇದಕ್ಕೆ ಪ್ರತಿಕ್ರಿಯಿಸಿದ ನೋಡಲ್ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಡೆಬ್ರಿಸ್ ತೆರವುಗೊಳಿಸಿ ಅಗತ್ಯ ಕ್ರಮ ವಹಿಸುವಂತೆ ವಾರ್ಡ್ ಅಭಿಯಂತರರಿಗೆ ಸೂಚಿಸಿದರು

## ❖ ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ವಿಭಾಗಕ್ಕೆ ಸಂಬಂಧಿಸಿದ ವಿಷಯಗಳು

- ವಾರ್ಡ್ ಸಮಿತಿ ಸದಸ್ಯರಾದ ಶ್ರೀಮತಿ ಮಹಾಲಕ್ಷ್ಮೀರವರು ತಮ್ಮ ಪ್ರದೇಶದಲ್ಲಿ ರಾತ್ರಿ ವೇಳೆಯಲ್ಲಿ ಬೀದಿ ದೀಪಗಳು ಬೆಳಗುತ್ತಿಲ್ಲವೆಂದು ದೂರು ನೀಡಿದರು ಹಾಗೂ ಸ್ವಿಚ್ ಬೋರ್ಡ್‌ಗಳ ವ್ಯವಸ್ಥೆ ಕಲ್ಪಿಸುವಂತೆ ಕೋರಿದರು.

***ಸಹಿ/-***

***ಸದಸ್ಯ ಕಾರ್ಯದರ್ಶಿಗಳು ವಾರ್ಡ್ ಸಮಿತಿ***
***ವಾರ್ಡ್ ಸಂಖ್ಯೆ-160***

***<u>ಪ್ರತಿಯನ್ನು:-</u>***

1. **ನೋಡಲ್ ಅಧಿಕಾರಿಗಳು, ವಾರ್ಡ್-160.**
2. ಜಂಟಿ ಆಯುಕ್ತರು, ರಾರಾನಗರ ವಲಯ.
3. ಮುಖ್ಯ ಅಭಿಯಂತರರು, ರಾರಾನಗರ ವಿಭಾಗ.
4. ಕಾರ್ಯಪಾಲಕ ಅಭಿಯಂತರರು, ರಾರಾನಗರ ವಿಭಾಗ.
5. ಸಭೆಯಲ್ಲಿ ಹಾಜರಿದ್ದ ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
6. ವಾರ್ಡ್ ಸಮಿತಿ ಸದಸ್ಯರುಗಳಿಗೆ.
7. ಕಛೇರಿ ಪ್ರತಿ.